DATE : 28/1/2020
DEPARTMENT / SUBJECT :
NAME OF THE NEWS PAPER : ಕನ್ನಡಪ್ರಭ

**ತಿದ್ದುಪಡಿ** ಮತ್ತೆ ಸಾರ್ವಜನಿಕ ಟ್ರಸ್ಟ್ ಮಸೂದೆ ಮಂಡನೆಗೆ ಸರ್ಕಾರ ನಿರ್ಧಾರ | 10 ವರ್ಷದ ಹಿಂದೆ ಪಾಸಾಗಿ ಹಿಂಪಡೆದಿದ್ದ ಮಸೂದೆ ಮತ್ತೆ ಜಾರಿ

# ಟ್ರಸ್ಟ್ ಭೂಮಿಯನ್ನು ಟ್ರಸ್ಟಿ ಮಾರುವುದಕ್ಕೆ ಬ್ರೇಕ್

• **ಕನ್ನಡಪ್ರಭ ವಾರ್ತೆ** ಬೆಂಗಳೂರು

ಕಳೆದ ಹತ್ತು ವರ್ಷಗಳ ಹಿಂದೆ ಹಿಂಪಡೆಯಲಾಗಿದ್ದ ಕರ್ನಾಟಕ ಸಾರ್ವಜನಿಕ ಟ್ರಸ್ಟ್ ವಿಧೇಯಕವನ್ನು ಮತ್ತೊಮ್ಮೆ ಜಾರಿಗೊಳಿಸಲು ಬಿಜೆಪಿ ಸರ್ಕಾರ ಮುಂದಾಗಿದೆ.

ಸಾರ್ವಜನಿಕ ಟ್ರಸ್ಟ್ ವಿಧೇಯಕ, ಭೂ ಸುಧಾರಣೆ ತಿದ್ದುಪಡಿ ಕಾಯ್ದೆ ಸೇರಿ 7ರಿಂದ 8 ವಿಧೇಯಕಗಳು ಹಾಗೂ 2ರಿಂದ 3 ಸುಗ್ರೀವಾಜ್ಞೆಗಳನ್ನು ವಿಧಾನ ಮಂಡಲ ಅಧಿವೇಶನದಲ್ಲಿ ಮಂಡಿಸಲು ಸರ್ಕಾರ ತೀರ್ಮಾನಿಸಿದೆ.



2011ರಲ್ಲಿ ಅಂದಿನ ಬಿಜೆಪಿ ಸರ್ಕಾರವು ಕರ್ನಾಟಕ ಸಾರ್ವಜನಿಕ ಟ್ರಸ್ಟ್ ವಿಧೇಯಕ ವನ್ನು ವಿಧಾನಮಂಡಲದಲ್ಲಿ ಅಂಗೀಕರಿಸಿ ರಾಜ್ಯಪಾಲರ ಅನುಮೋದನೆಗೆ ಕಳುಹಿಸಿತ್ತು. ಆದರೆ, ಆಡಳಿತ ಮತ್ತು ಪ್ರತಿಪಕ್ಷದ ತೀವ್ರ ವಿರೋಧದಿಂದಾಗಿ ನಂತರ ವಾಪಸ್ ಪಡೆ ಯಲಾಯಿತು. ಇದೀಗ ಮತ್ತೊಮ್ಮೆ ಟ್ರಸ್ಟ್ ವಿಧೇಯಕವನ್ನು ಮಂಡಿಸಲು ನಿರ್ಧರಿಸಿದೆ. ಟ್ರಸ್ಟ್ ಹೆಸರಲ್ಲಿ ಕಾರ್ಯ ನಿರ್ವಹಿಸುವ ಧಾರ್ಮಿಕ ಮತ್ತು ಶಿಕ್ಷಣ ಸಂಸ್ಥೆಗಳಲ್ಲಿ ಪಾರದರ್ಶಕತೆ ಕಾಯ್ದುಕೊಳ್ಳುವ ಸಂಬಂಧ ಕರ್ನಾಟಕ ಸಾರ್ವಜನಿಕ ಟ್ರಸ್ಟ್ ಕಾಯ್ದೆಮಂಡನೆಮಾಡಲುನಿರ್ಧರಿಸಲಾಗಿದೆ. ಟ್ರಸ್ಟಿ ಹೆಸರಲ್ಲಿ ಅಕ್ರಮ ಜಮೀನು ಮಾರಾಟ ತಡೆಯಲು ಕಾಯ್ದೆ ಸಹಕಾರಿಯಾಗಲಿದೆ. ಸೂಕ್ತ ನಿಯಮಾವಳಿಗಳು ಇಲ್ಲದ ಕಾರಣ ಯಾವುದೇ ಕ್ರಮ ತೆಗೆದುಕೊಳ್ಳಲುಸಾಧ್ಯವಾಗುತ್ತಿಲ್ಲ. ಈಕಾರಣಕ್ಕಾಗಿಕಾಯ್ದೆಮಂಡನೆಗೆ ಮುಂದಾಗಿದ್ದೇವೆ ಎಂದು ಕಾನೂನು ಮತ್ತು ಸಂಸದೀಯ ಸಚಿವ ಜೆ.ಸಿ. ಮಾಧುಸ್ವಾಮಿ ತಿಳಿಸಿದ್ದಾರೆ.

ಸೋಮವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬರುವ ಫೆ.17ರಂದು ಜಂಟಿ ಅಧಿವೇಶನ ಕರೆಯಲಾಗಿದ್ದು, ರಾಜ್ಯಪಾಲರು ಜಂಟಿ ಅಧಿವೇಶನವನ್ನು ಉದ್ದೇಶಿಸಿ ಭಾಷಣ ಮಾಡಲಿದ್ದಾರೆ. 18ರಂದು ವಿಧೇಯಕಗಳು ಹಾಗೂ ಸುಗ್ರೀವಾಜ್ಞೆಗಳನ್ನು ಮಂಡಿಸಲಾಗುವುದು. ನಂತರ ಅವುಗಳ ಸಾಧಕ-ಬಾಧಕಗಳ ಕುರಿತು ಚರ್ಚೆಗೆ ಅವಕಾಶ ನೀಡಲಾಗುವುದು. ಮಾ.5ರಂದು ಬಜೆಟ್ ಮಂಡನೆಯಾಗಲಿದ್ದು, ಅದಕ್ಕೂ ಮುನ್ನ ಚರ್ಚೆಗೆ ಅವಕಾಶ ನೀಡಲಾಗುವುದು ಎಂದು ಹೇಳಿದರು.

**ಸರ್ಕಾರದಿಂದ ಪಡೆದ ಭೂಮಿ ಮಾರಾಟಕ್ಕೆ ಅವಕಾಶ:** ಭೂ ಸುಧಾರಣೆ ಕಾಯ್ದೆಯ ಕಲಂ 109ಕ್ಕೆ ತಿದ್ದುಪಡಿ ತರಲು ಸರ್ಕಾರ ಮುಂದಾಗಿದೆ. ಇದರನ್ವಯ ಕೃಷಿಯೇತರ ಭೂಮಿಯನ್ನು ಮಾರಾಟ ಮಾಡಲು ಇಚ್ಛಿಸುವವರಿಗೆ ವಿನಾಯಿತಿ ನೀಡಲಾಗುವುದು. ಸರ್ಕಾರದಿಂದ ಭೂಮಿ ಪಡೆದು 7 ವರ್ಷಗಳಾದರೂ ಸದ್ಬಳಕೆ ಮಾಡಲು ಸಾಧ್ಯವಾಗದೆ ಮಾರಾಟ ಮಾಡಲು ಮುಂದಾದರೆ ಅವಕಾಶ ನೀಡಲಾಗುವುದು. ಆದರೆ ಯಾವ ಉದ್ದೇಶಕ್ಕಾಗಿ ಭೂಮಿ ಪಡೆಯಲಾಗಿರುತ್ತದೆಯೋ ಖರೀದಿಸುವವರು ಸಹ ಅದೇ ಉದ್ದೇಶಕ್ಕೆ ಬಳಕೆ ಮಾಡಬೇಕು. ಸದ್ಯಕ್ಕೆ ಭೂಮಿಯನ್ನು ಮಾರಾಟ ಮಾಡಲು ಅವಕಾಶ ಇಲ್ಲ. ಇದಕ್ಕೆ ತಿದ್ದುಪಡಿ ಮಾಡಿ ಮಾರಾಟಕ್ಕೆ ಅನುಮತಿ ನೀಡಲಾಗುವುದು ಎಂದರು.

**ಬಡವರಿಗೆ ಶಿಕ್ಷಣದಲ್ಲಿ ಶೇ.10 ಮೀಸಲು:** ಕೇಂದ್ರ ಸರ್ಕಾರದ ಶೈಕ್ಷಣಿಕ ಸಂಸ್ಥೆಯಲ್ಲಿ ಶೇ.10ರಷ್ಟು ಆರ್ಥಿಕ ದುರ್ಬಲರಿಗೆ ಮೀಸಲಾತಿ ನೀಡಲಾಗುತ್ತಿದೆ. ಇದೇ ಮಾದರಿಯಲ್ಲಿ ರಾಜ್ಯದ ಶೈಕ್ಷಣಿಕ ಸಂಸ್ಥೆಯಲ್ಲಿಯೂ ಮೀಸಲಾತಿ ನೀಡುವ ಚಿಂತನೆ ಸರ್ಕಾರದ ಮುಂದಿದ್ದು, ಪರಿಶೀಲನೆ ಹಂತದಲ್ಲಿದೆ ಎಂದು ಇದೇ ವೇಳೆ ತಿಳಿಸಿದರು. ಬೆಂಗಳೂರಿನಲ್ಲಿರುವ ರಾಷ್ಟ್ರೀಯ ಕಾನೂನು ಶಾಲೆಯಲ್ಲಿ ರಾಜ್ಯದ ವಿದ್ಯಾರ್ಥಿಗಳಿಗೆ ಶೇ.25ರಷ್ಟು ಪ್ರವೇಶಕ್ಕೆ ಮೀಸಲಾತಿ ನೀಡುವ ಸಂಬಂಧ ಮಸೂದೆಯನ್ನು ಮಂಡಿಸಲಾಗುವುದು ಎಂದು ಸಚಿವ ಮಾಧುಸ್ವಾಮಿ ತಿಳಿಸಿದರು.

## ಫೆ.17ರಿಂದ ಅಧಿವೇಶನ, ಮಾ.5ಕ್ಕೆ ರಾಜ್ಯ ಬಜೆಟ್

**ಬೆಂಗಳೂರು:** ವಿಧಾನ ಮಂಡಲ ಜಂಟಿ ಅಧಿವೇಶನ ಹಾಗೂ ಬಜೆಟ್ ಅಧಿವೇಶನದ ಕಾರ್ಯಕಲಾಪಗಳ ವೇಳಾಪಟ್ಟಿ ಬಿಡುಗಡೆಯಾಗಿದೆ. ಫೆ.17ರಿಂದ ಫೆ.20ರವರೆಗೆ ವಿಧಾನಮಂಡಲ ಅಧಿವೇಶನ ನಡೆಯಲಿದ್ದು, ಫೆ.17ರಂದು ಬೆಳಗ್ಗೆ 11 ಗಂಟೆಗೆ ಜಂಟಿ ಅಧಿವೇಶನ ಉದ್ದೇಶಿಸಿ ರಾಜ್ಯಪಾಲರು ಭಾಷಣ ಮಾಡಲಿದ್ದಾರೆ. ಉಳಿದಂತೆ ಮಾ.2ರಿಂದ ಮಾ.31ರವರೆಗೆ ಬಜೆಟ್ ಅಧಿವೇಶನ ನಡೆಯಲಿದ್ದು, ಮಾ.5ರಂದು ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅವರು 2019-20ನೇ ಸಾಲಿನ ಬಜೆಟ್ ಮಂಡನೆ ಮಾಡಲಿದ್ದಾರೆ. ಒಟ್ಟು 21 ದಿನಗಳ ಕಾಲ ಕಾರ್ಯಕಲಾಪ ನಡೆಯಲಿರುವ ಬಜೆಟ್ ಅಧಿವೇಶನವು ಮಾ.31ರಂದು ಕೊನೆಗೊಳ್ಳಲಿದೆ ಎಂದು ಕರ್ನಾಟಕ ವಿಧಾನಸಭೆ ಕಾರ್ಯದರ್ಶಿಗಳು ಹೊರಡಿಸಿರುವ ತಾತ್ಕಾಲಿಕ ಕಾರ್ಯಕ್ರಮ ಪಟ್ಟಿಯಲ್ಲಿ ತಿಳಿಸಲಾಗಿದೆ.